# ಜೆಎಸ್‌ಎಸ್ ಮಹಾವಿದ್ಯಾಪೀಠ
# ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

## ಶಿವಾನುಭವ ದಾಸೋಹ–290
## ಮತ್ತು
## ಲಲಿತಾದ್ರಿ ಮಹಿಳಾ ವೇದಿಕೆಯ ಉದ್ಘಾಟನೆ

**25 ಜೂನ್ 2022 * ಶನಿವಾರ * ಸಂಜೆ 6.00**

**# 129, ಸೋಮೇಶ್ವರ ಕೃಪ, ಜೆಎಸ್‌ಎಸ್ ಬಡಾವಣೆ 2ನೇ ಹಂತ, ಮೈಸೂರು 570 028**

---

### ದಿವ್ಯ ಆಶೀರ್ವಾದ

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಸುತ್ತೂರು ಶ್ರೀಕ್ಷೇತ್ರ

### ಅಧ್ಯಕ್ಷತೆ

**ಶ್ರೀ ಸುರೇಶ್‌ಕುಮಾರ್ ಜೈನ್**

ಕೈಗಾರಿಕೋದ್ಯಮಿ ಮತ್ತು ಕಾರ್ಯದರ್ಶಿ, ಮೈಸೂರು ಇಂಡಸ್ಟ್ರೀಸ್ ಅಸೋಸಿಯೇಶನ್
ಹಾಗೂ MSME ಕೌನ್ಸಿಲ್, ಮೈಸೂರು

### ಉದ್ಘಾಟನೆ

**ಶ್ರೀಮತಿ ಶಾರದ ಶಿವಲಿಂಗಸ್ವಾಮಿ**

ಅಧ್ಯಕ್ಷರು, ಕದಳಿ ಮಹಿಳಾ ವೇದಿಕೆ, ಮೈಸೂರು

### ಉಪನ್ಯಾಸ

**ಶ್ರೀ ಎಸ್.ಎಂ. ಸಿದ್ಧರಾಜಪ್ಪ**

ಮುಖ್ಯೋಪಾಧ್ಯಾಯರು, ಬಾಲಕಿಯರ ಸರ್ಕಾರಿ ಪ್ರೌಢಶಾಲೆ
ಕಬ್ಬಹಳ್ಳಿ, ಗುಂಡ್ಲುಪೇಟೆ ತಾಲ್ಲೂಕು

**ವಿಷಯ : ವಚನಗಳಲ್ಲಿ ಜೀವನ ಮೌಲ್ಯಗಳು**

### ಭಜನೆ

**ಶ್ರೀ ಶಿವರಾತ್ರೀಶ್ವರ ಭಜನಾ ಮಂಡಳಿ**

ಜೆಎಸ್‌ಎಸ್ ಬಡಾವಣೆ, 2ನೇ ಹಂತ, ಮೈಸೂರು

---

### ಪ್ರಾಯೋಜಕರು

**ಶ್ರೀಮತಿ ಡಿ. ಸುಮಾ ಮತ್ತು ಶ್ರೀ ಆರ್.ಎಸ್. ರವಿ**

ಸೆಲೆಕ್ಷನ್ ಗ್ರೇಡ್ ಉಪನ್ಯಾಸಕರು, ಜೆಎಸ್‌ಎಸ್ ಪಾಲಿಟೆಕ್ನಿಕ್, ನಂಜನಗೂಡು
ಮುಖ್ಯ ಶಿಕ್ಷಕರು, ಜೆಎಸ್‌ಎಸ್ ಬಾಲಕಿಯರ ಪ್ರೌಢಶಾಲೆ, ಚಾಮರಾಜನಗರ

**ತಮಗೆ ಆದರದ ಸ್ವಾಗತ**

ಶ್ರೀಮತ್ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕವೇ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಅವರು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮ ಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿ ಮುಂತಾದ ಹಲವಾರು ಸಂಸ್ಥೆಗಳ ಮೂಲಕ ಧರ್ಮದಾಸೋಹವನ್ನು ನಡೆಸುತ್ತಿದ್ದರು. 1986 ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಗಳನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ದಿನಾಂಕ 12.5.1996 ರಂದು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಶ್ರೀ ಸುರೇಶ್ ಕುಮಾರ್ ಜೈನರವರು** ಕೈಗಾರಿಕೋದ್ಯಮಿಗಳು. ರಾಜ್ಯ ಸರ್ಕಾರದ ಅತ್ಯುತ್ತಮ ಸಣ್ಣ ಕೈಗಾರಿಕೆ ಪ್ರಶಸ್ತಿ ಪುರಸ್ಕೃತರು. ಮೈಸೂರು ಭಾಗದ ಬಹುತೇಕ ಕೈಗಾರಿಕೆಗಳಿಗೆ ಕಾಟನ್ ವೇಸ್ಟ್, ಬಟ್ಟೆ ತುಂಡುಗಳನ್ನು ಯಂತ್ರ, ವಾಹನಗಳ ಶುದ್ಧೀಕರಣಕ್ಕಾಗಿ ಸರಬರಾಜು ಮಾಡಿಸುತ್ತಿದ್ದಾರೆ. ವಿವಿಧ ಸಂಘ ಸಂಸ್ಥೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಸಾರ್ವಜನಿಕರ ಕುಂದುಕೊರತೆಗಳನ್ನು ನಿವಾರಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ಶ್ರವಣಬೆಳಗೊಳದಲ್ಲಿ ನಡೆದಿರುವ ನಾಲ್ಕು ಮಹಾಮಸ್ತಕಾಭಿಷೇಕ ಕಾರ್ಯಕ್ರಮಗಳಲ್ಲಿ ವಿವಿಧ ಜವಾಬ್ದಾರಿಗಳನ್ನು ಯಶಸ್ವಿಯಾಗಿ ನಿರ್ವಹಿಸಿದ್ದಾರೆ.

**ಶ್ರೀ ಎಸ್.ಎಂ. ಸಿದ್ಧರಾಜಪ್ಪನವರು** ನಂಜನಗೂಡು ತಾಲ್ಲೂಕಿನ ಸೋನಹಳ್ಳಿಯವರು. ಶಿಕ್ಷಕರಾಗಿ ಯಳಂದೂರು ಜೆಎಸ್‌ಎಸ್ ಪ್ರೌಢಶಾಲೆಯಲ್ಲಿ ವೃತ್ತಿ ಆರಂಭಿಸಿದರು. ನಂತರ ಸರ್ಕಾರಿ ಪ್ರೌಢಶಾಲೆ, ಪದವಿಪೂರ್ವ ಕಾಲೇಜುಗಳಲ್ಲಿ ಸೇವೆ ಸಲ್ಲಿಸಿದ್ದಾರೆ. ಪ್ರಸ್ತುತ ಗುಂಡ್ಲುಪೇಟೆ ತಾಲ್ಲೂಕು ಕಬ್ಬಹಳ್ಳಿ ಬಾಲಕಿಯರ ಸರ್ಕಾರಿ ಪ್ರೌಢಶಾಲೆಯಲ್ಲಿ ಮುಖ್ಯೋಪಾಧ್ಯಾಯರಾಗಿ, ಮೂರು ದಶಕಗಳಿಂದಲೂ ಬೋಧಕರಾಗಿದ್ದಾರೆ. ಉತ್ತಮ ಶಿಕ್ಷಕರೆಂಬ ಗೌರವಕ್ಕೆ ಭಾಜನರಾಗಿದ್ದಾರೆ.

**ಶ್ರೀ ಆರ್.ಎಸ್. ರವಿರವರು** ಚಾಮರಾಜನಗರ ತಾಲ್ಲೂಕಿನ ರಾಮಸಮುದ್ರದವರು. ಚಾಮರಾಜನಗರ ಜೆಎಸ್‌ಎಸ್ ಬಾಲಕಿಯರ ಪ್ರೌಢಶಾಲೆಯಲ್ಲಿ ಮುಖ್ಯ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಶ್ರೀಮತಿ ಡಿ. ಸುಮಾರವರು ನಂಜನಗೂಡು ಜೆಎಸ್‌ಎಸ್ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಸೆಲೆಕ್ಷನ್ ಗ್ರೇಡ್ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಪುತ್ರಿ ಶ್ರೀಮತಿ ಆರ್. ಪೂಜಾ ಹೊನ್ನೇಶ್ವರಿಯವರು ಗೃಹಿಣಿಯಾಗಿದ್ದು, ಅಮೆರಿಕದಲ್ಲಿ ನೆಲಸಿದ್ದಾರೆ. ಪುತ್ರ ಶ್ರೀ ಆರ್. ಮನು ಸೋಮೇಶ್ವರರವರು ಮೈಸೂರಿನಲ್ಲಿ ಇಂಜಿನಿಯರಿಂಗ್ ವ್ಯಾಸಂಗ ಮಾಡುತ್ತಿದ್ದಾರೆ.

.